# ಮೈಸೂರು ವಿಶ್ವವಿದ್ಯಾನಿಲಯ

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ಕ್ರಾಫರ್ಡ್ ಹಾಲ್, ಮೈಸೂರು-05.

ಸಂಖ್ಯೆ: ಡಿ.ಓ.ಆರ್.9.5/ಪಿಹೆಚ್.ಡಿ/ಇತರೆ-3/2015-16 ದಿನಾಂಕ: 24-06-2022

## ಸುತ್ತೋಲೆ

ವಿಷಯ: ಪಿಹೆಚ್.ಡಿ ವಿದ್ಯಾರ್ಥಿಗಳಿಗೆ ಡಾಕ್ಟರೇಟ್ ಪದವಿಯನ್ನು ನಿಗಧಿಪಡಿಸಿದ ಅವಧಿಯೊಳಗೆ ಪೂರ್ಣಗೊಳಿಸುವ ಬಗ್ಗೆ.

ಉಲ್ಲೇಖ: 1. 15ನೇ ವಿಧಾನ ಸಭೆಯ ಸಮಿತಿಯ 4ನೇ ವರದಿಯಲ್ಲಿನ ಕ್ರಮಸಂಖ್ಯೆ 06ರಲ್ಲಿ ಮಾಡಲಾಗಿರುವ ಶಿಫಾರಸ್ಸು.

2. ಮಾನ್ಯ ಕುಲಪತಿಗಳ ಅನುಮೋದನೆಯ ದಿನಾಂಕ: 24-06-2022.

*****

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಕರ್ನಾಟಕ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ 15ನೇ ವಿಧಾನ ಸಭೆಯ ಸಮಿತಿಯ ವರದಿಯಲ್ಲಿನ ಕ್ರಮ ಸಂಖ್ಯೆ 06ರಲ್ಲಿ ತಿಳಿಸಿರುವಂತೆ ಪಿಹೆಚ್.ಡಿ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯವು ನಿಗಧಿಪಡಿಸಿದ ಅವಧಿಯೊಳಗೆ ಡಾಕ್ಟರೇಟನ್ನು ಪಡೆಯುವಲ್ಲಿ ವಿಫಲವಾದಲ್ಲಿ ಆಯಾ ಅಭ್ಯರ್ಥಿಗಳ ಹೊಣೆಯನ್ನು ಆಯಾ ಸಂಶೋಧನಾ ಮಾರ್ಗದರ್ಶಕರು/ವಿಭಾಗದ ಮುಖ್ಯಸ್ಥರುಗಳು ಹಾಗೂ ಬೋಧಕ ವರ್ಗದವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ತಿಳಿಸಿರುತ್ತಾರೆ.

ಆದ್ದರಿಂದ, ಸರ್ಕಾರದ ಆದೇಶದಂತೆ ಸಂಶೋಧನಾ ವಿದ್ಯಾರ್ಥಿಗಳು ನಿಗಧಿಪಡಿಸಿದ ಅವಧಿಯೊಳಗೆ ಡಾಕ್ಟರೇಟ್ ಪದವಿ ಪಡೆಯುವಂತೆ ಎಲ್ಲಾ ಸಂಶೋಧನ ವಿದ್ಯಾರ್ಥಿಗಳಿಗೂ ಹಾಗೂ ಮಾರ್ಗದರ್ಶಕರುಗಳಿಗೆ ವಿಭಾಗದ ಮುಖ್ಯಸ್ಥರು ತಿಳಿಸುವಂತೆ ಸೂಚಿಸಲಾಗಿದೆ.

24/6/22

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಗೆ:

1. ಎಲ್ಲಾ ವಿಭಾಗದ ಅಧ್ಯಕ್ಷರು/ಪ್ರಾಂಶುಪಾಲರು/ಸಂಯೋಜನಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
2. ನಿರ್ದೇಶಕರು/ಪ್ರಾಂಶುಪಾಲರು, ಸ್ನಾತಕೋತ್ತರ ಕೇಂದ್ರ, ಹಾಸನ/ಮಂಡ್ಯ/ಚಾಮರಾಜನಗರ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಮುಖ್ಯಸ್ಥರು, ಮೈಸೂರು ವಿಶ್ವವಿದ್ಯಾನಿಲಯದಿಂದ ಮಾನ್ಯತೆ ಹೊಂದಿರುವ ಎಲ್ಲಾ ಕಾಲೇಜು/ಸಂಸ್ಥೆಗಳು/ಸಂಶೋಧನಾ ಕೇಂದ್ರಗಳು.
4. ಉಪ ಕುಲಸಚಿವರು, ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗ ವಿಶೇಷ ಘಟಕ, ಮಹಾರಾಜ ಕಾಲೇಜು ಶತಮಾನೋತ್ಸವ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570005.
5. ನಿರ್ದೇಶಕರು, ICD, ಮಾನಸಗಂಗೋತ್ರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570006.
6. ಮಾನ್ಯ ಕುಲಪತಿಗಳು/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ), ಇವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570005.
7. ಕಛೇರಿ ಪ್ರತಿ.